# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **387**

ಸದಸ್ಯರ ಹೆಸರು : ಶ್ರೀ ಆರ್. ಪ್ರಸನ್ನ ಕುಮಾರ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 11-12-2020

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಸರ್ಕಾರಕ್ಕೆ ಬರುವ ವಾರ್ಷಿಕ ಆದಾಯವೆಷ್ಟು; (ವಿವರ ನೀಡುವುದು) | 2019-20ನೇ ಸಾಲಿಗೆ ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯ ಪ್ರಾದೇಶಿಕ ಸಾರಿಗೆ ಕಚೇರಿ, ಶಿವಮೊಗ್ಗ ಮತ್ತು ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿ, ಸಾಗರ ಕಚೇರಿಗಳಿಗೆ ಒಟ್ಟಾರೆಯಾಗಿ ವಾರ್ಷಿಕ ಗುರಿ ರೂ.133.04 ಕೋಟಿಗಳನ್ನು ನಿಗಧಿಪಡಿಸಿದ್ದು, ಗುರಿಗೆ ಎದುರಾಗಿ ರೂ.125.65 ಕೋಟಿಗಳಷ್ಟು ರಾಜಸ್ವ ಸಂಗ್ರಹಣೆ ಮಾಡಲಾಗಿದೆ.<br><br>2020-21ನೇ ಸಾಲಿಗೆ ವಾರ್ಷಿಕ ಗುರಿ ರೂ.133.20 ಕೋಟಿಗಳನ್ನು ನಿಗಧಿಪಡಿಸಿದ್ದು, ಗುರಿಗೆ ಎದುರಾಗಿ ನವೆಂಬರ್-2020 ರ ಅಂತ್ಯಕ್ಕೆ ರೂ.66.12 ಕೋಟಿಗಳಷ್ಟು ರಾಜಸ್ವ ಸಂಗ್ರಹಣೆ ಮಾಡಲಾಗಿದೆ. |
| ಆ) | ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಖಾಸಗಿ ಬಸ್‌ಗಳು ಸಾರಿಗೆ ಅನುಮತಿ ಪಡೆದು ಸಂಚರಿಸುತ್ತಿದೆ; ಪರವಾನಿಗೆ ಇಲ್ಲದೆ ಅನಧಿಕೃತ ಬಸ್‌ಗಳು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಸ್ತುತ 1240 ಖಾಸಗಿ ಬಸ್‌ಗಳು ಪರವಾನಿಗೆ ಪಡೆದು ಸಂಚರಿಸುತ್ತಿವೆ. ಪರವಾನಗಿ ಇಲ್ಲದೆ ಯಾವುದೆ ಅನಧಿಕೃತ ಬಸ್ಸುಗಳು ಸಂಚರಿಸುತ್ತಿರುವುದಿಲ್ಲ. |

ಟಿಡಿ 115 ಟಿಡಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು